ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ನಗರ ಪ್ರದೇಶಗಳಿಗೆ ಹೊಂದಿಕೊಂಡಂತಿರುವ ಗ್ರಾಮ ಪಂಚಾಯತ್ ಪ್ರದೇಶಗಳನ್ನು ಪಟ್ಟಣ ಪಂಚಾಯಿತಿಗೆ ಸೇರ್ಪಡೆ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

200 (276) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಗರ ಪ್ರದೇಶಕ್ಕೆ ಹೊಂದಿಕೊಂಡಿರುವ ಪ್ರದೇಶಗಳು ವಾಣಿಜ್ಯ ಚಟುವಟಿಕೆಗಳಿಂದ ಬಹಳಷ್ಟು ಮುಂದುವರೆದಿದ್ದರೂ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಬಂದರೆ ಹೆಚ್ಚು ತೆರಿಗೆ ಸಂಗ್ರಹವಾಗುವುದರಿಂದ ಸರ್ಕಾರದ ಬೊಕ್ಕಸಕ್ಕೆ ವರಮಾನ ಹೆಚ್ಚುತ್ತದೆ ಹಾಗೂ ಆ ಪ್ರದೇಶದ ಅಭಿವೃದ್ಧಿಗೆ ಉತ್ತೇಜನ ನೀಡಿದಂತಾಗುವುದರಿಂದ ಈ ಬಗ್ಗೆ ಸರ್ಕಾರದ ನಿರ್ಧಾರವೇನು;

(ಇ) ಇಂತಹ ಯಾವುದಾದರೂ ಪ್ರದೇಶಗಳನ್ನು ಸರ್ಕಾರ ಗುರುತಿಸಿದೆಯೇ?